# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕೊಡಗು ಜಿಲ್ಲಾ ಪಂಚಾಯತ್ ಕಟ್ಟಡವನ್ನು ಹೊಸದಾಗಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** 1)ಸಚಿವ ಸಂಪುಟ ನಿರ್ಣಯ ಸಂ.ಸಿ.450/2015 ದಿನಾಂಕ:31-08-2015.

2)ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, **ಮಡಿಕೇರಿ** ರವರ ಪ್ರಸ್ತಾವನೆ ಸಂ.ಕೊಜಿಪಂ/ ಮುಯೋಕ/ ಜಿ.ಪಂ.ಕಟ್ಟಡ/ 3/14-15, ದಿನಾಂಕ:24-01-2015.

****

ಮೇಲೆ ಓದಲಾದ ಕ್ರಮಸಂಖ್ಯೆ(2)ರ ಕೊಡಗು ಜಿಲ್ಲಾ ಪಂಚಾಯತ್ ಪ್ರಸ್ತಾವನೆಯಲ್ಲಿ ಕೊಡಗು ಜಿಲ್ಲಾ ಪಂಚಾಯತ್‌ಗೆ ಸ್ವಂತ ಕಛೇರಿ ಕಟ್ಟಡವಿಲ್ಲದೆ ತಾತ್ಕಾಲಿಕವಾಗಿ ಜಿಲ್ಲೆಯ ಪ್ರಾಚ್ಯವಸ್ತು ಇಲಾಖೆಗೆ ಸೇರಿದ ಕಟ್ಟಡದಲ್ಲಿ ಈವರೆಗೂ ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲಾಧಿಕಾರಿಗಳ ನಿರ್ಣಯದಂತೆ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದ ಸ್ಥಳವನ್ನು ಪ್ರಾಚ್ಯವಸ್ತು ಇಲಾಖೆಗೆ ಬಿಟ್ಟುಕೊಟ್ಟು ಜಿಲ್ಲಾಧಿಕಾರಿಗಳು ಗೊತ್ತುಮಾಡಿದ **ಕರವಾಲೆ ಬಾಡಗ** ಗ್ರಾಮದ ಸರ್ವೇ ನಂ.12/6ಪಿ1ರ 5.00 ಎಕರೆ ಪ್ರದೇಶದಲ್ಲಿ ನೂತನವಾಗಿ ಜಿಲ್ಲಾ ಪಂಚಾಯತ್ ಹಾಗೂ ಅದರಡಿ ಕಾರ್ಯನಿರ್ವಹಿಸುವ ಅಧೀನ ಕಛೇರಿಗಳನ್ನೊಳಗೊಂಡ ಸುಸಜ್ಜಿತ **3** ಅಂತಸ್ತಿನ ಕಛೇರಿ ಸಂಕೀರ್ಣವನ್ನು **ರೂ.18.25 ಕೋಟಿ** ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ(K.H.B. ಮುಖೇನ) ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾಪಿಸಿರುತ್ತಾರೆ.

ಪ್ರಸ್ತುತ ಕಾಮಗಾರಿಯು ಮೂಲತ: **ರೂ.4.99 ಕೋಟಿ** ವೆಚ್ಚದಲ್ಲಿ KRIDL ಮುಖೇನ ನಿರ್ಮಿಸಲು ಉದ್ದೇಶಿಸಿದ್ದು, ನಂತರ ವಿವಿಧ ಅಧೀನ ಕಛೇರಿಗಳನ್ನು ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡದಲ್ಲಿಯೇ ಕಾರ್ಯನಿರ್ವಹಿಸುವಂತೆ ವ್ಯವಸ್ಥೆ ಮಾಡುವ ಉದ್ದೇಶದಿಂದ ಅಂದಾಜು ಮೊತ್ತವನ್ನು **ರೂ.4.99 ಕೋಟಿ**ಯಿಂದ **ರೂ.18.25 ಕೋಟಿ**ಗೆ ಪರಿಷ್ಕರಿಸಿ, ಕಾಮಗಾರಿಯನ್ನು ಕೆ.ಹೆಚ್.ಬಿ. ರವರಿಂದ ಅನುಷ್ಠಾನಿಸಲು ಅಥವಾ KTPP ಕಾಯ್ದೆಯನ್ವಯ ನಿರ್ಮಿಸಲು ಪ್ರಸ್ತಾವನೆ ಇದೆ.

**ರೂ.18.25 ಕೋಟಿ** ಅಂದಾಜು ಮೊತ್ತದ ಪೈಕಿ ಪ್ರಸ್ತುತ ಕೊಡಗು ಜಿಲ್ಲಾ ಪಂಚಾಯತ್‌ನಲ್ಲಿ ನಿಯಮಾನುಸಾರ ಲಭ್ಯವಾಗುವ ಲೆಕ್ಕಶೀರ್ಷಿಕೆಗಳಡಿ **ರೂ.6.063 ಕೋಟಿಗಳು** ಲಭ್ಯವಿದ್ದು, ಉಳಿಕೆ **ರೂ.12.187 ಕೋಟಿ** ಹೆಚ್ಚುವರಿ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಬೇಕೆಂದು ಕೋರಿರುತ್ತಾರೆ.

ಈ ಸಂಬಂಧ ಮೇಲೆ ಓದಲಾದ ಕ್ರ.ಸಂ.(1) ರನ್ವಯ **ರೂ.18.25 ಕೋಟಿ** ವೆಚ್ಚದ ಕೊಡಗು ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ಸಂಕೀರ್ಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ.ಗ್ರಾಅಪ.2.ಗ್ರಾಮೂಸೌ.2015 ಬೆಂಗಳೂರು, ದಿನಾಂಕ:11-09-2015.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ಕೊಡಗು ಜಿಲ್ಲಾ. ಪಂಚಾಯತ್ ನೂತನ ಕಛೇರಿ ಕಟ್ಟಡವನ್ನು **ಕರವಾಲೆ ಬಾಡಗ ಗ್ರಾಮದ ಸರ್ವೇ ನಂ.12/6ಪಿ1 ರ 5.00 ಎಕರೆ** ಪ್ರದೇಶದಲ್ಲಿ **ರೂ.18.25 ಕೋಟಿ** ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಛೇರಿ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿದೆ:

**ಷರತ್ತುಗಳು:-**

1. ಸದರಿ ಕಾಮಗಾರಿಯ ಅಂದಾಜುಪಟ್ಟಿಗೆ ಸಕ್ಷಮ ತಾಂತ್ರಿಕ ಪ್ರಾಧಿಕಾರವಾದ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಂದ ನಿಯಮಾನುಸಾರ ಪ್ರಸ್ತಾವನೆಗೆ ಅನುಮೋದನೆ ಪಡೆದುಕೊಂಡು ಸರ್ಕಾರಕ್ಕೆ ಸಲ್ಲಿಸುವುದು.
2. ಈ ಆದೇಶದಲ್ಲಿ ಅನುಮೋದಿಸಿರುವ ಕಟ್ಟಡ ಕಾಮಗಾರಿಯು ಜಿಲ್ಲಾ ಪಂಚಾಯತ್‌ನ ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ಧೃಡಪಡಿಸಿಕೊಳ್ಳತಕ್ಕದ್ದು.

3. ಕಾಮಗಾರಿಯ ಅನುಷ್ಠಾನವನ್ನು KTPP ನಿಯಮಗಳನ್ವಯ ಕೈಗೊಳ್ಳುವುದು.

4. ಕೊಡಗು ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ಸಂಕೀರ್ಣದ **ರೂ.18.25 ಕೋಟಿ** ಅಂದಾಜು ಮೊತ್ತದ ಪೈಕಿ ಲಭ್ಯವಿರುವ **ರೂ.6.063 ಕೋಟಿ**ಯಿಂದ ಕಾಮಗಾರಿ ಪ್ರಾರಂಭಿಸಿ, ನಿಯಮಾನುಸಾರ ಲಭ್ಯವಾಗುವ ಅನುದಾನಗಳಿಂದ ಕಾಲಕಾಲಕ್ಕೆ ಸರ್ಕಾರದಿಂದ ಅನುಮೋದನೆ ಪಡೆದು ಕಾಮಗಾರಿ ಪ್ರಗತಿಗೊಳಿಸಿ, ಹೆಚ್ಚುವರಿಯಾಗಿ ಬೇಕಾಗುವ ಅನುದಾನಕ್ಕೆ ಮುಂಬರುವ ಆರ್ಥಿಕ ವರ್ಷಗಳಲ್ಲಿ ಜಿಲ್ಲಾ ವಲಯದಡಿ ಬರತಕ್ಕ ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ನಿರ್ಮಾಣ & ನಿರ್ವಹಣೆ **(2515–00–196–1–14)** ಒದಗಿಸಿಕೊಂಡು **2** ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸಬೇಕು.

5. ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವಾಗ ಹಾಗೂ ಮುಕ್ತಾಯದ ತರುವಾಯ ಕಟ್ಟಡದ ಛಾಯಾಚಿತ್ರಗಳನ್ನು ತೆಗೆದು **"ಗಾಂಧಿ ಸಾಕ್ಷಿ ಕಾಯಕ "** ದಲ್ಲಿ ಕಡ್ಡಾಯವಾಗಿ ಅಳವಡಿಸಿದ ನಂತರವೇ ಬಿಲ್ಲುಗಳನ್ನು ಪಾವತಿಸುವುದು.

6. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಜಿಲ್ಲಾ ಪಂಚಾಯತಿಯ ಗುಣನಿಯಂತ್ರಣ ವಿಭಾಗದಿಂದ ಪರಿವೀಕ್ಷಣೆ ಮಾಡಿಸಿ ಸರ್ಕಾರಕ್ಕೆ ಕಾಲಕಾಲಕ್ಕೆ ವರದಿ ಸಲ್ಲಿಸಬೇಕು.

7. ಈ ಆದೇಶದಂತೆ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿದ ಕಾಮಗಾರಿಯ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರ ಮುಖಾಂತರ ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಟಿಪ್ಪಣಿ ಸಂ.ಗ್ರಾಅಪ/575/ಆಂಆಸ/ ದಿನಾಂಕ:08-09-2015 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಕೃಷ್ಣಪ್ಪ) 11/9/15
ನಿರ್ದೇಶಕರು(ಗ್ರಾ.ಮೂ.ಸೌ-2) ಹಾಗೂ
ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**panchayat.build@gmail.com Ph.No.080-22343509**

ಇವರಿಗೆ:-

ಗೆ:- 1.ಮಹಾಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು
2.ಮಹಾಲೇಖಪಾಲರು(ಆಡಿಟ್-1), ಕರ್ನಾಟಕ, ಬೆಂಗಳೂರು
3.ಮಹಾಲೇಖಪಾಲರು(ಆಡಿಟ್-2), ಕರ್ನಾಟಕ, ಬೆಂಗಳೂರು

ಪ್ರತಿಯನ್ನು:-

1. ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ಪಿಎಂಯು)(ಐಎಫ್), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು

5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
7. ವಿಶೇಷಾಧಿಕಾರಿಗಳು(ಜಿಲ್ಲಾ ಪಂಚಾಯತ್) ಮತ್ತು ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ
10. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಡಗು
11. ಜಿಲ್ಲಾ ಖಜಾನಾಧಿಕಾರಿಗಳು, ಕೊಡಗು
12. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಕಟ್ಟಡ, ಶೇಷಾದ್ರಿಪುರಂ, ಬೆಂಗಳೂರು–560 020.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
14. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ–6 (ಜಿಲ್ಲಾ ಪಂಚಾಯತ್), ಆರ್ಥಿಕ ಇಲಾಖೆ, ಬೆಂಗಳೂರು
17. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು)
18. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು